ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದಲ್ಲಿ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ ಶಿಷ್ಯವೇತನದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):-

507(708) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಓದುತ್ತಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಬಿಡುಗಡೆಯಾಗಿದೆಯೇ; ಬಿಡುಗಡೆಯಾಗಿದ್ದಲ್ಲಿ, 2017-18 ರಿಂದ 2019-20 ರವರೆಗೆ ವಿವರ ನೀಡುವುದು;

(ಆ) ರಾಜ್ಯದಲ್ಲಿ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ಪ್ರತಿಭಾ ಪುರಸ್ಕಾರ (Prize Money) ತಡೆ ಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ ತಡೆಹಿಡಿಯಲಾಗಿದೆ; (ವಿವರ ನೀಡುವುದು)

(ಇ) ಕಾಲೇಜು ವಿದ್ಯಾರ್ಥಿಗಳಿಗೆ ಟ್ಯಾಬ್‌ಲೇಟ್ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಎಂದಿನಿಂದ ನೀಡಲಾಗುವುದು?